## ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ನಡವಳಿ

**ವಿಷಯ:** ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗೆ ಒಳಪಡಲಿರುವ ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯ ವ್ಯಾಪ್ತಿಗೆ ನೀಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಇಡಿ/64/ಎಲ್‌ಐಬಿ/2015,ದಿನಾಂಕ: 26.02.2019.
2. ಸರ್ಕಾರದ ಆದೇಶ ಸಂಖ್ಯೆ:ಇಡಿ/64/ಎಲ್‌ಐಬಿ/2015, ದಿನಾಂಕ: 24.07.2019
3. ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ/206/ಗ್ರಾಪಂಅ/ 2021, ದಿನಾಂಕ: 16.11.2022.
4. ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ:ಕಪಂರಾಆ/ಅಬಿವೃದ್ಧಿ/ಗ್ರಂಥಾಲಯ/ 532/2021(ಭಾಗ-1), ದಿನಾಂಕ:06.06.2023.
5. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ ಇವರ ಪತ್ರ ಸಂಖ್ಯೆ: ಸಾಗ್ರಂಇ/ ನಿಕ/ಬಿ3/39 ಸ್ವ.ಸ/2023-24/4962 , ದಿನಾಂಕ: 20.11.2023.

***

### ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ(1) ಮತ್ತು (2)ರ ಸರ್ಕಾರದ ಆದೇಶದಲ್ಲಿ ರಾಜ್ಯದಲ್ಲಿನ 5633 ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯಿತಿಗಳಿಗೆ ವರ್ಗಾಯಿಸಲಾಗಿರುತ್ತದೆ. ಓದಲಾದ ಕ್ರಮ ಸಂಖ್ಯೆ (3)ರ ಸುತ್ತೋಲೆಯಲ್ಲಿ ತಿಳಿಸಿರುವಂತೆ ಗ್ರಂಥಾಲಯ ಕಟ್ಟಡಗಳು, ಮತ್ತು ಎಲ್ಲಾ ಸಂಬಂಧಿಸಿದ ಪರಿಕರಗಳು, ದಾಖಲೆಗಳು ಮತ್ತು ಪುಸ್ತಕಗಳನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ವರ್ಗಾಯಿಸಲು ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ತಿಳಿಸಲಾಗಿರುತ್ತದೆ ಹಾಗೂ ಓದಲಾದ ಕ್ರಮ ಸಂಖ್ಯೆ (4)ರಲ್ಲಿ ಗ್ರಂಥಾಲಯ ವರ್ಗಾವಣೆಗೆ ಸಂಬಂಧಿಸಿದಂತೆ ಹೊರಡಿಸಲಾಗಿರುವ ಪ್ರತ್ಯೇಕ ಮಾರ್ಗಸೂಚಿ ಸುತ್ತೋಲೆಯಂತೆ ಹಸ್ತಾಂತರಿಸಲು ಕ್ರಮಹಿಸಲು ತಿಳಿಸಲಾಗಿದೆ.

ಓದಲಾದ ಕ್ರಮ ಸಂಖ್ಯೆ(5)ರಲ್ಲಿ ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ ರವರ ಪತ್ರದಲ್ಲಿ ಮಂಗಳೂರು ಜಿಲ್ಲೆಯ ಅಧೀನದಲ್ಲಿ ಬರುವ ಗ್ರಾಮ ಪಂಚಾಯಿತಿ ಗ್ರಂಥಾಲಯವನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ವರ್ಗಾಯಿಸುವಂತೆ ಕೋರಲಾಗಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ: ಕಪಂರಾಆ/ಅಭಿವೃದ್ಧಿ/ಗ್ರಂಥಾಲಯ/532/2021(ಭಾಗ-1)**

**ಬೆಂಗಳೂರು, ದಿನಾಂಕ:16.03.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಂಗಳೂರು ಜಿಲ್ಲೆಯ ಅಧೀನದಲ್ಲಿ ಬರುವ ಗ್ರಾಮ ಪಂಚಾಯಿತಿ ಗ್ರಂಥಾಲಯವನ್ನು ಪುರಸಭೆ, ಪಟ್ಟಣ ಪಂಚಾಯಿತಿ, ನಗರಸಭೆ,

ಮಹಾನಗರ ಪಾಲಿಕೆ ವ್ಯಾಪ್ತಿಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಅಧೀನದ ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ವರ್ಗಾಯಿಸಿ ಆದೇಶಿಸಿದೆ.

| ಕ್ರ. ಸಂ. | ಜಿಲ್ಲೆಯ ಹೆಸರು | ತಾಲ್ಲೂಕು | ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಹೆಸರು |
|---|---|---|---|
| 1 | ಮಂಗಳೂರು | ಪುತ್ತೂರು | ಕಡಬ |

ಉಲ್ಲೇಖ (3) ರಲ್ಲಿನ ಸುತ್ತೋಲೆಯಲ್ಲಿ ತಿಳಿಸಿರುವಂತೆ ಗ್ರಂಥಾಲಯಗಳನ್ನು ವರ್ಗಾಯಿಸಿ ಹಸ್ತಾಂತರಿಸಲು ಕ್ರಮವಹಿಸುವಂತೆ ತಿಳಿಸಿದೆ.

**(ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರಿಂದ ಟಿಪ್ಪಣಿ ಅನುಮೋದಿಸಲ್ಪಟಿದೆ)**

ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಬೆಂಗಳೂರು.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
3. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು
4. ನಿರ್ದೇಶಕರು, ಟಿ.ಎನ್.ಎಂ.ಸಿ., ಖಜಾನೆ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
7. ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಡಬ ಗ್ರಾಮ ಪಂಚಾಯಿತಿ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ (ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
8. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, 4ನೇ ಮಹಡಿ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
9. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
10. ಮಾಹಿತಿ ಕೇಂದ್ರ/ ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
11. ಮಾಹಿತಿ ಕೇಂದ್ರ/ವೆಬ್ ಸೈಟ್, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿಯವರಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು
4. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-6, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಹೆಚ್ಚುವರಿ ಪ್ರತಿ/ ಶಾಖಾ ರಕ್ಷಾ ಕಡತಕ್ಕೆ.